**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿ.ಸಿ. ಸಂಖ್ಯೆಃ 37/2017**

**ಪಿರ್ಯಾದಿದಾರರುಃ** ರಾಜ್ಯಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೊಲೀಸ್ ಠಾಣೆ.

**ವಿರುದ್ಧ**

**ಆರೋಪಿತರುಃ** ಯೋಗೀಶ ಜಿ.ಎನ್. ಬಿನ್ ನಾಗೇಶ ಜಿ.ಎಸ್.,
24 ವರ್ಷ ವಯಸ್ಸು,
ವಾಸಃ ನಂ.110, ಗೌರಿಕೊಪ್ಪಲು,
ಹಾಸನ ಟೌನ್, ಹಾಸನ.

**ತಿದ್ದುಪಡಿ ದೋಷಾರೋಪಣೆ**

**ಶ್ರೀ ದೀಪು ಬಿ.ಸಿ.**, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ, ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

ದಿನಾಂಕ 20.02.2016 ರಂದು ಬೆಳಗ್ಗೆ 11.45 ಗಂಟೆ ಸಮಯದಲ್ಲಿ ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ಚನ್ನರಾಯಪಟ್ಟಣ ಟೌನ್ ನಲ್ಲಿರುವ ಎ.ಪಿ.ಎಂ.ಸಿ. ಮಾರುಕಟ್ಟೆಯ ಮೂಲೆಯಲ್ಲಿ ಆರೋಪಿಯಾದ ನೀವು, ಚುನಾವಣಾ ಸಮಯದಲ್ಲಿ ಮದ್ಯವನ್ನು ಮಾರಾಟ ಮಾಡಬಾರದೆಂದು ನಿಷೇದಾಜ್ಞೆ ಇದ್ದರೂ ಸಹ, ಸರ್ಕಾರದ ಆದೇಶವನ್ನು ಉಲ್ಲಂಘಿಸಿದ್ದು, ಆ ಮೂಲಕ ಆರೋಪಿಯಾದ ನೀವು **ಭಾ.ದಂ.ಸಂ. ಕಲಂಃ 188** ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಎಸಗಿರುತ್ತೀರಿ.

2) ಮೇಲೆ ಹೇಳಿದ ದಿನ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು, ಸಾರ್ವಜನಿಕ ಸ್ಥಳದಲ್ಲಿ ನಿಂತು ಯಾವುದೇ ಪರವಾನಗಿ ಇಲ್ಲದೆ ಅಕ್ರಮವಾಗಿ ಒಂದು

ಪ್ಲಾಸ್ಟಿಕ್ ಕವರ್ ನೊಳಗೆ ಕೊಡೇಸ್ XXX ರಮ್ ಎಂದು ಲೇಬಲ್ ಇರುವ 180 ಎಂ.ಎಲ್. ನ 11 ಮದ್ಯದ ಟೆಟ್ರಾ ಪ್ಯಾಕೆಟ್ ಗಳನ್ನು ಮತ್ತು ಫ್ರೆಂಡ್ಸ್ ಕ್ಲಬ್ ಡಿಲಕ್ಸ್ ವಿಸ್ಕಿ ಎಂದು ಲೇಬಲ್ ಇರುವ 180 ಎಂ.ಎಲ್. ನ 14 ಮದ್ಯದ ಟೆಟ್ರಾ ಪ್ಯಾಕೆಟ್ ಗಳನ್ನು ಸಾರ್ವಜನಿಕರಿಗೆ ಮಾರಾಟ ಮಾಡಿ, ಆ ಮೂಲಕ ಆರೋಪಿಯಾದ ನೀವು **ಕರ್ನಾಟಕ ಅಬಕಾರಿ ಕಾಯ್ದೆ ಕಲಂ.32** ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಎಸಗಿರುತ್ತೀರಿ.

ಸದರಿ ಆರೋಪಕ್ಕೆ ಆರೋಪಿ/ಗಳಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗತಕ್ಕದ್ದು ಎಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ **12.08.2022.**

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿ.ಸಿ. ಸಂಖ್ಯೆಃ 37/2017**

**ಪಿರ್ಯಾದಿದಾರರುಃ** ರಾಜ್ಯಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೊಲೀಸ್ ಠಾಣೆ.

**ವಿರುದ್ಧ**

**ಆರೋಪಿತರುಃ** ಯೋಗೀಶ ಜಿ.ಎನ್. ಬಿನ್ ನಾಗೇಶ ಜಿ.ಎಸ್.,
24 ವರ್ಷ ವಯಸ್ಸು,
ವಾಸಃ ನಂ.110, ಗೌರಿಕೊಪ್ಪಲು,
ಹಾಸನ ಟೌನ್, ಹಾಸನ.

**ದೋಷಾರೋಪಣೆ**

**ಪ್ರಶ್ನೆ 1 ಃ** ದೋಷಾರೋಪಣೆಯನ್ನು ಓದಿ ಹೇಳಿದ್ದು ಅರ್ಥವಾಯಿತೆ ?

**ಉತ್ತರ ಃ** ಅರ್ಥವಾಯಿತು

**ಪ್ರಶ್ನೆ 2ಃ** ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆ ?

**ಉತ್ತರ ಃ** ವಿಚಾರಣೆಯಾಗಬೇಕು

(ಸದರಿ ದೋಷಾರೋಪಣೆಯನ್ನು ಆರೋಪಿಗೆ ಓದಿ, ಹೇಳಿ, ಕೇಳಿ ಆರೋಪಿಯು ಕೊಟ್ಟ ಉತ್ತರವನ್ನು ಅವರ ಹೇಳಿಕೆಯಂತೆ ಬರೆದುಕೊಳ್ಳಲಾಯಿತು ಎಂದು ದೃಢೀಕರಿಸಲಾಗಿದೆ.

ದಿನಾಂಕಃ 12.08.2022

(ದೀಪು ಬಿ.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.